# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1087 |
| ಮಾನ್ಯ ಸದಸ್ಯರ ಹೆಸರು | : | ಡಾ\|\| ಎಂ.ಜಿ. ಮುಳೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 20.08.2025 |
| ಉತ್ತರಿಸುವ ಸಚಿವರು | : | ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪಶುಸಂಗೋಪನೆ ಇಲಾಖೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗದವರಿಗಾಗಿ ಇರುವ ಯೋಜನೆಗಳು ಯಾವುವು: (ವಿವರ ನೀಡುವುದು) | ಪಶುಸಂಗೋಪನೆ ಇಲಾಖೆಯಲ್ಲಿ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಫಲಾನುಭವಿಗಳಿಗೆ ನೀಡಲಾಗುತ್ತಿರುವ ಫಲಾನುಭವಿ ಆಧಾರಿತ ಕಾರ್ಯಕ್ರಮಗಳನ್ನು **ಅನುಬಂಧ** ದಲ್ಲಿ ನೀಡಿದೆ. ಇಲಾಖೆಯಲ್ಲಿ ಹಿಂದುಳಿದ ವರ್ಗದವರಿಗಾಗಿ ಪ್ರತ್ಯೇಕವಾಗಿ ಕಾರ್ಯಕ್ರಮಗಳು ಇರುವುದಿಲ್ಲ, ಸಾಮಾನ್ಯ ವರ್ಗ ಫಲಾನುಭವಿಗಳಿಗೆ ನೀಡಲಾಗುವ ಕಾರ್ಯಕ್ರಮಗಳಲ್ಲಿ ಅರ್ಹ ಹಿಂದುಳಿದ ವರ್ಗದ ಫಲಾನುಭವಿಗಳಿಗೆ ಸೌಲಭ್ಯ ನೀಡಲಾಗುತ್ತಿದೆ. |
| ಆ) | ಪಶುಸಂಗೋಪನೆ ಇಲಾಖೆಯಲ್ಲಿ ಇರುವ ಸಾಲದ ಯೋಜನೆಗಳಾವುವು ಮತ್ತು ಫಲಾನುಭವಿಗಳಾಗಲು ಇರುವ ಮಾನದಂಡಗಳಾವುವು; (ಸಂಪೂರ್ಣ ಮಾಹಿತಿ ಒದಗಿಸುವುದು) | ಪ್ರಸಕ್ತ ಸಾಲಿನಲ್ಲಿ ಪಶುಸಂಗೋಪನೆ ಇಲಾಖೆಯಲ್ಲಿ ಸಾಲ ನೀಡುವ ಯೋಜನೆಗಳು ಇರುವುದಿಲ್ಲ. |
| ಇ) | ಪಶುಪಾಲಕ ಸಮಾಜದವರಿಗಾಗಿ ಬೇಸಿಗೆಯಲ್ಲಿ ಉಂಟಾಗುವ ಮೇವಿನ ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಳ್ಳುವ ಮುನ್ನೆಚ್ಚರಿಕೆ ಕ್ರಮಗಳಾವುವು; (ವಿವರ ನೀಡುವುದು) | ಪಶುಪಾಲಕ ಸಮಾಜದವರಿಗಾಗಿ ಬೇಸಿಗೆಯಲ್ಲಿ ಉಂಟಾಗುವ ಮೇವಿನ ಕೊರತೆಯನ್ನು ನೀಗಿಸಲು NDRF / SDRF ನಿಯಮಾನುಸಾರ ಸರ್ಕಾರ ತೆಗೆದುಕೊಳ್ಳುವ ಮುನ್ನೆಚ್ಚರಿಕೆ ಕ್ರಮಗಳು:<br>➢ ಸಾಪ್ತಾಹಿಕ ಮೇವಿನ ವರದಿಯನ್ವಯ ಯಾವುದೇ ತಾಲ್ಲೂಕಿನಲ್ಲಿ ಮೇವಿನ ಲಭ್ಯತೆಯು 4 ವಾರಗಳಿಗಿಂತ ಕಡಿಮೆ ಆದಲ್ಲಿ ಮೇವಿನ ಬ್ಯಾಂಕ್‌ನ್ನು ತೆರೆದು ರೈತರಿಗೆ ರಿಯಾಯಿತಿ ದರದಲ್ಲಿ ಒಣ ಮೇವನ್ನು ಪೂರೈಸಲು ಕ್ರಮವಹಿಸಲಾಗುತ್ತದೆ. |

...2

| | | |
|---|---|---|
| | | ➢ ಸಾಪ್ತಾಹಿಕ ಮೇವಿನ ವರದಿಯನ್ವಯ ಯಾವುದೇ ತಾಲ್ಲೂಕಿನಲ್ಲಿ ಮೇವಿನ ಲಭ್ಯತೆಯು 2 ವಾರಗಳಿಗಿಂತ ಕಡಿಮೆ ಆದಲ್ಲಿ ಹೋಬಳಿ ಮಟ್ಟದಲ್ಲಿ ಜಾನುವಾರು ಶಿಬಿರವನ್ನು ತೆರೆದು ಜಾನುವಾರುಗಳಿಗೆ ಮೇವು, ನೀರು, ನೆರಳನ್ನು ಒದಗಿಸಲಾಗುತ್ತದೆ.<br>➢ ಜಾನುವಾರುಗಳಿಗೆ ಮೇವಿನ ಸಮಸ್ಯೆ ಉಂಟಾಗದಂತೆ ಮುಂಜಾಗ್ರತೆಯಾಗಿ ಮೇವು ಉತ್ಪಾದನೆಯನ್ನು ಹೆಚ್ಚಿಸಲು ನೀರಾವರಿ ಸೌಲಭ್ಯವಿರುವ ರೈತರಿಗೆ ಕಡಿಮೆ ಅವಧಿಯಲ್ಲಿ ಮೇವು ಉತ್ಪಾದಿಸುವ ಮೇವಿನ ಬೀಜದ ಮಿನಿಕಿಟ್‌ಗಳನ್ನು ಉಚಿತವಾಗಿ ವಿತರಿಸಲಾಗುತ್ತದೆ.<br>➢ ಇಲಾಖೆಯ ಕ್ಷೇತ್ರಗಳಲ್ಲಿ ಮೇವಿನ ಬೇರುಗಳನ್ನು ಉತ್ಪಾದಿಸಿ ಆಸಕ್ತ ರೈತರಿಗೆ ವಿತರಿಸಲಾಗುತ್ತದೆ.<br>➢ ಕಡಿಮೆ ದರ್ಜೆಯ ಮೇವಿಗೆ ಯೂರಿಯ ದ್ರಾವಣವನ್ನು ಸಿಂಪಡಿಸಿ ಒಣ ಮೇವು ಪೌಷ್ಟೀಕರಣಗೊಳಿಸುವ ಕುರಿತು ಹಾಗೂ ಹಸಿರು ಮೇವಿನಿಂದ ರಸಮೇವು ತಯಾರಿಸಿ ಸಂರಕ್ಷಿಸಿ, ಬೇಸಿಗೆಯಲ್ಲಿ ಜಾನುವಾರುಗಳಿಗೆ ಉಪಯೋಗಿಸಲು ರೈತರಿಗೆ ತರಬೇತಿ ಮತ್ತು ಪ್ರಾತ್ಯಕ್ಷಿಕೆ ನೀಡಲಾಗುತ್ತಿದೆ.<br>➢ ರೈತರು ಬೆಳೆಯುವ ಮೇವು ಪೋಲಾಗದಂತೆ ಸದ್ಬಳಕೆ ಮಾಡಿಕೊಳ್ಳಲು ರೈತರಿಗೆ ರಿಯಾಯಿತಿ ದರದಲ್ಲಿ ಮೇವು ಕತ್ತರಿಸುವ ಯಂತ್ರಗಳನ್ನು ವಿತರಿಸಲಾಗುತ್ತದೆ.<br>➢ ತೋಟಗಾರಿಕೆ ಬೆಳೆಗಳ ಮಧ್ಯ ಖಾಲಿ ಇರುವ ಪ್ರದೇಶಗಳಲ್ಲಿ ಮೇವು ಬೆಳೆಯುವ ಕಾರ್ಯಕ್ರಮವನ್ನು ಅಳವಡಿಸಿಕೊಳ್ಳಲು ರೈತರಿಗೆ ಸೂಕ್ತ ಮಾರ್ಗದರ್ಶನ ನೀಡಲಾಗುತ್ತಿದೆ. |

**ಪಸಂಮೀ 205 ಸಲೆವಿ 2025**

(signature)

**(ಕೆ. ವೆಂಕಟೇಶ್)**

**ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**

## ಅನುಬಂಧ

## ಪ್ರಸಕ್ತ ಸಾಲಿನಲ್ಲಿ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ನೀಡಲಾಗುತ್ತಿರುವ ಫಲಾನುಭವಿ ಆಧಾರಿತ ಕಾರ್ಯಕ್ರಮಗಳು.

| ಕ್ರ. ಸಂ | ಸೌಲಭ್ಯಗಳ ವಿವರ |
|---|---|
| 1. | **ಹಾಲು ಉತ್ಪಾದಕರಿಗೆ ಉತ್ತೇಜನ**<br>ಪ್ರಾಥಮಿಕ ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಹಾಲು ಸರಬರಾಜು ಮಾಡುವ ಸದಸ್ಯರಿಗೆ ಪ್ರತಿ ಲೀಟರ್ ಗುಣಾತ್ಮಕ ಹಾಲಿಗೆ ರೂ. 5/- ರಂತೆ ಪ್ರೋತ್ಸಾಹ ಧನ ಪಾವತಿಸಲಾಗುತ್ತಿದೆ. |
| 2. | **ರಾಸುಗಳ ಆಕಸ್ಮಿಕ ಸಾವಿಗೆ ಆಪತ್ತುನಿಧಿ**<br>ರಾಸುಗಳು ಆಕಸ್ಮಿಕ ಮರಣ ಹೊಂದಿದಾಗ ರೈತರಿಗೆ ಉಂಟಾಗುವ ಆರ್ಥಿಕ ನಷ್ಟವನ್ನು ಭರಿಸಲು ಮರಣ ಹೊಂದಿದ ದನ, ಎಮ್ಮೆ, ಎತ್ತು, ಹೋರಿ ಮತ್ತು ಕಡಸುಗಳಿಗೆ ರೂ.15000/- ಪರಿಹಾರಧನವನ್ನು ರಾಸುಗಳ ಮಾಲೀಕರಿಗೆ ವಿತರಿಸಲಾಗುತ್ತಿದೆ. |
| 3. | **ಸಣ್ಣ ಪ್ರಾಣಿಗಳ ಆಕಸ್ಮಿಕ ಸಾವಿಗೆ ಆಪತ್ತುನಿಧಿ**<br>ಆಕಸ್ಮಿಕ ಮರಣ ಹೊಂದಿದ 3-6 ತಿಂಗಳ ವಯಸ್ಸಿನ ಕುರಿ/ ಮೇಕೆಗಳಿಗೆ 5000 ರೂ. ಹಾಗೂ 6 ತಿಂಗಳ ಮೇಲ್ಪಟ್ಟ ಕುರಿ/ಮೇಕೆಗಳಿಗೆ ಅವುಗಳ ಮಾಲೀಕರಿಗೆ ರೂ.7500/- ಪರಿಹಾರಧನ ವಿತರಣೆ ಮಾಡಲಾಗುತ್ತಿದೆ. |
| 4. | **10 ಹೆಣ್ಣು +1 ಗಂಡು ಕುರಿ / ಮೇಕೆ ವಿತರಣೆ**<br>ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದಲ್ಲಿ ನೊಂದಣಿಯಾಗಿರುವ ಗ್ರಾಮೀಣ ಭಾಗದ ಪರಿಶಿಷ್ಟ ಜಾತಿ ಮತ್ತು ಪಂಗಡದ ಕುರಿಗಾರರಿಗೆ ಶೇ 90 ರ ಸಹಾಯಧನದೊಂದಿಗೆ 10+1 ಕುರಿ/ ಮೇಕೆ ಘಟಕ ವಿತರಣೆ ಮಾಡಲಾಗುವುದು. |
| 5. | **ನಾಟಿ ಕೋಳಿಮರಿಗಳ ವಿತರಣೆ**<br>05 ವಾರದ 20 ಕೋಳಿ ಮರಿಗಳನ್ನು ಉಚಿತವಾಗಿ ಗ್ರಾಮೀಣ ಭಾಗದ ರೈತ ಮಹಿಳೆಯರಿಗೆ ವಿತರಿಸಲಾಗುವುದು. |
| 6. | **ಮೇವಿನ ಕಿರು ಪೊಟ್ಟಣಗಳ ವಿತರಣೆ**<br>05 ಕೆ.ಜಿ ಮೇವಿನ ಬೀಜಗಳ ಕಿರು ಪೊಟ್ಟಣಗಳನ್ನು ನೀರಾವರಿ ಜಮೀನು ಹೊಂದಿರುವ ರೈತರಿಗೆ ವಿತರಿಸಲಾಗುವುದು. |
| 7. | **ರಬ್ಬರ್ ನೆಲಹಾಸುಗಳ ವಿತರಣೆ**<br>ಕನಿಷ್ಠ ಎರಡು ಜಾನುವಾರು ಹೊಂದಿರುವ ಅರ್ಹ ಫಲಾನುಭವಿಗಳಿಗೆ ಎರಡು ನೆಲ ಹಾಸುಗಳನ್ನು ವಿತರಿಸಲಾಗುವುದು. |
| 8. | **ಮೇವು ಕತ್ತರಿಸುವ ಯಂತ್ರಗಳ ವಿತರಣೆ**<br>2 ಹೆಚ್.ಪಿ ಸಾಮರ್ಥ್ಯದ ಮೇವು ಕತ್ತರಿಸುವ ಯಂತ್ರಗಳನ್ನು (Chaff Cutter) ಜಾನುವಾರು ಹಾಗೂನೀರಾವರಿ ಜಮೀನು ಹೊಂದಿರುವ ಅರ್ಹ ಫಲಾನುಭವಿಗಳಿಗೆ ಆದ್ಯತೆ ಮೇರೆಗೆ ನೀಡಲಾಗುವುದು. |
| 9. | **ಜಾನುವಾರು ವಿಮಾ ಯೋಜನೆ**<br>ಫಲಾನುಭವಿಗಳ ಹೈನುಗಾರಿಕೆಗೆ ಯೋಗವುಳ್ಳ ಒಂದು ವರ್ಷ ಮೇಲ್ಪಟ್ಟ ಮತ್ತು ಗರಿಷ್ಠ ವಯಸ್ಸು 8 ವರ್ಷಗಳಿಗೆ ಮೀರದಂತಹ ಮಣಕ /ಆಕಳು / ಎಮ್ಮೆಗಳನ್ನು ಒಂದು ವರ್ಷದ/ ಮೂರು ವರ್ಷದ ಅವಧಿಗೆ ಗರಿಷ್ಠ ರೂ. 70 ಸಾವಿರ ಮೂಲ ಬೆಲೆಯವರೆಗೆ ಕೆಳಕಂಡ ಪ್ರೀಮಿಯಂ ಸಹಾಯಧನ ದರದಂತೆ ವಿಮೆ ಸೌಲಭ್ಯ ಒದಗಿಸುವುದು.<br>**ಸಹಾಯಧನ**: 85% — **ಫಲಾನುಭವಿಯವಂತಿಗೆ**: 15%<br>ಪ್ರೀಮಿಯಂ ದರ ಒಂದು ವರ್ಷಕ್ಕೆ ವಿಮಾ ಮೊತ್ತಕೆ ಶೇ 3.78, ಎರಡು ವರ್ಷಕ್ಕೆ ವಿಮಾ ಮೊತ್ತಕ್ಕೆ ಶೇ.7.56 ಮತ್ತು ಮೂರು ವರ್ಷಕ್ಕೆ ವಿಮಾ ಮೊತ್ತಕೆ ಶೇ 11. |